ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಅಡಿ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಮಕ್ಕಳ ರಕ್ಷಣಾ ಸಮಿತಿಗಳನ್ನು ರಚಿಸುವ ಬಗ್ಗೆ.

ಓದಲಾಗಿದೆ:-

1) ಸರ್ಕಾರಿ ಆದೇಶ ಸಂಖ್ಯೆ: ಮಮಇ 71 ಮಭಾಬ 2009, ದಿನಾಂಕ: 15.06.2010.
2) ಸರ್ಕಾರಿ ಆದೇಶ ಸಂಖ್ಯೆ: ಮಮಇ 79 ಮಭಾಬ 2011, ದಿನಾಂಕ: 23.09.2011.
3) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಕುಕ 30 ಎಫ್‌ಪಿಇ 2014 ದಿನಾಂಕ:29.01.2014
4) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು ಇವರ ಪತ್ರ ಸಂಖ್ಯೆ:ಮ.ಮ.ಅ.ಇ.:ಕೆ.ಎಸ್.ಐ.ಸಿ.ಪಿ.ಎಸ್:ಸಿಪಿಸಿ:01:2012-13, ದಿನಾಂಕ:29.06.2013.

ಪ್ರಸ್ತಾವನೆ:-

ಬಾಲನ್ಯಾಯ ಕಾಯ್ದೆ, ಸಮಗ್ರ ಬೀದಿ ಮಕ್ಕಳ ಕಾರ್ಯಕ್ರಮ, ದತ್ತು ಕಾರ್ಯಕ್ರಮ ಮತ್ತು ಮಕ್ಕಳ ಸಹಾಯವಾಣಿ ಇತ್ಯಾದಿ ಯೋಜನೆಗಳನ್ನು ಒಂದುಗೂಡಿಸಿ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ವಯ ಸಮಗ್ರ ಮಕ್ಕಳ ಸಂರಕ್ಷಣಾ ಯೋಜನೆಯನ್ನು ದಿನಾಂಕ: 22.03.2010 ರಂದು ಕೇಂದ್ರ ಸರ್ಕಾರದೊಡನೆ ಮಾಡಿಕೊಂಡಿರುವ ಒಪ್ಪಂದದನ್ವಯ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಕೇಂದ್ರ ಪುರಸ್ಕೃತ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು (ಐ.ಸಿ.ಪಿ.ಎಸ್) ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಐ.ಸಿ.ಪಿ.ಎಸ್. ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸಲು ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಧಿಕಾರಿ/ಅಧಿಕಾರೇತರ ಸದಸ್ಯರನ್ನೊಳಗೊಂಡಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳನ್ನು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ ರಚಿಸಲಾಗಿದೆ.

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳನ್ವಯ ಗ್ರಾಮಮಟ್ಟದ ಮಕ್ಕಳ ರಕ್ಷಣಾ ಸಮಿತಿಯ ಕಾರ್ಯವನ್ನು ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ / ಆರೋಗ್ಯ ಯೋಜನೆ ಮತ್ತು ಮಾನಿಟರಿಂಗ್ ಸಮಿತಿಗೆ ವಹಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಅನಧಿಕೃತ ಟಿಪ್ಪಣಿಯಲ್ಲಿ ಸಹಮತಿಸಿದೆ.

ಗ್ರಾಮ ಮಕ್ಕಳ ರಕ್ಷಣಾ ಸಮಿತಿಯ ಕಾರ್ಯವನ್ನು ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ / ಆರೋಗ್ಯ ಯೋಜನೆ ಮತ್ತು ಮಾನಿಟರಿಂಗ್ ಸಮಿತಿಗೆ ವಹಿಸಲು, ಈಗಾಗಲೇ ರಚಿಸಲಾಗಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕವೇ ಜಿಲ್ಲಾ ಮಕ್ಕಳ ಸಮಿತಿಯಾಗಿ ಕಾರ್ಯನಿರ್ವಹಿಸಲು ಮತ್ತು ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ ಜಿಲ್ಲಾ ಮಟ್ಟದ ಮಕ್ಕಳ ರಕ್ಷಣಾ ಘಟಕದ ಸಮಿತಿಯಲ್ಲಿರುವ ಸದಸ್ಯರ ಹುದ್ದೆಗಳ ಸಮಾನಾಂತರ ತಾಲ್ಲೂಕು ಅಧಿಕಾರಿಗಳನ್ನು ನೇಮಕ ಮಾಡಿ ಈ ಕೆಳಕಂಡ ತಾಲ್ಲೂಕು ಮಟ್ಟದ ಸಮಿತಿಯನ್ನು ರಚಿಸಲು

ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಇವರು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಕ್ರ.ಸಂ	ಹುದ್ದೆ	ಪದನಾಮ
1.	ತಹಶೀಲ್ದಾರ ಮತ್ತು ತಾಲ್ಲೂಕು ದಂಡಾಧಿಕಾರಿಗಳು	ಅಧ್ಯಕ್ಷರು
2.	ಕಾರ್ಯನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ	ಉಪಾಧ್ಯಕ್ಷರು
3.	ವೃತ್ತ ಪೊಲೀಸ್ ನಿರೀಕ್ಷಕರು, ಪೊಲೀಸ್ ಇಲಾಖೆ	ಸದಸ್ಯರು
4.	ತಾಲ್ಲೂಕು ಶಿಕ್ಷಣಾಧಿಕಾರಿ, ಶಿಕ್ಷಣ ಇಲಾಖೆ	ಸದಸ್ಯರು
5.	ತಾಲ್ಲೂಕು ವೈದ್ಯಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	ಸದಸ್ಯರು
6.	ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ, ಸಮಾಜ ಕಲ್ಯಾಣ ಇಲಾಖೆ	ಸದಸ್ಯರು
7.	ತಾಲ್ಲೂಕು ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ	ಸದಸ್ಯರು
8.	ತಾಲ್ಲೂಕು ಪ್ರತಿನಿಧಿ	ಸದಸ್ಯರು
9.	ತಾಲ್ಲೂಕು ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು	ಸದಸ್ಯರು
10.	ಮುನ್ಸಿಪಾಲಿಟಿ / ಪಟ್ಟಣ ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು	ಸದಸ್ಯರು
11.	ತಾಲ್ಲೂಕು ಮಟ್ಟದ ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ (ಜಿಲ್ಲಾಧಿಕಾರಿಗಳು ನಾಮನಿರ್ದೇಶನ ಮಾಡುವುದು)	ಸದಸ್ಯರು
12.	ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಒಬ್ಬ ಸದಸ್ಯರು	ಸದಸ್ಯರು
13.	ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	ಸದಸ್ಯ ಕಾರ್ಯದರ್ಶಿ

ಆದೇಶ ಸಂಖ್ಯೆ:ಮಮಇ 274 ಮಭಾಬ 2013 ಬೆಂಗಳೂರು, ದಿನಾಂಕ:28.07.2014.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ, ಈಗಾಗಲೇ ರಚಿಸಲಾಗಿರುವ ಜಿಲ್ಲಾ ಮಕ್ಕಳ ರಕ್ಷಣಾ ಘಟಕವೇ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿಯಾಗಿ ಕಾರ್ಯನಿರ್ವಹಿಸತಕ್ಕದ್ದು.

ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ /ಆರೋಗ್ಯ ಯೋಜನೆ ಮತ್ತು ಮಾನಿಟರಿಂಗ್ ಸಮಿತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಚಿಸಲಾಗಿದ್ದು, ಸದರಿ ಸಮಿತಿಯು ಗ್ರಾಮ ಮಟ್ಟದ ಮಕ್ಕಳ ರಕ್ಷಣಾ ಸಮಿತಿಯಾಗಿಯೂ ಸಹ ಕಾರ್ಯನಿರ್ವಹಿಸತಕ್ಕದ್ದು.

ಈ ಕೆಳಕಂಡಂತೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನೊಳಗೊಂಡಂತೆ **ತಾಲ್ಲೂಕು ಮಕ್ಕಳ ರಕ್ಷಣಾ ಸಮಿತಿಯನ್ನು** ರಚಿಸಿ ಆದೇಶಿಸಲಾಗಿದೆ.

ಕ್ರ.ಸಂ	ಹುದ್ದೆ	ಪದನಾಮ
1.	ತಹಶೀಲ್ದಾರ ಮತ್ತು ತಾಲ್ಲೂಕು ದಂಡಾಧಿಕಾರಿಗಳು	ಅಧ್ಯಕ್ಷರು
2.	ಕಾರ್ಯನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ	ಉಪಾಧ್ಯಕ್ಷರು
3.	ವೃತ್ತ ಪೊಲೀಸ್ ನಿರೀಕ್ಷಕರು, ಪೊಲೀಸ್ ಇಲಾಖೆ	ಸದಸ್ಯರು
4.	ತಾಲ್ಲೂಕು ಶಿಕ್ಷಣಾಧಿಕಾರಿ, ಶಿಕ್ಷಣ ಇಲಾಖೆ	ಸದಸ್ಯರು
5.	ತಾಲ್ಲೂಕು ವೈದ್ಯಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	ಸದಸ್ಯರು
6.	ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿ, ಸಮಾಜ ಕಲ್ಯಾಣ ಇಲಾಖೆ	ಸದಸ್ಯರು
7.	ತಾಲ್ಲೂಕು ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ	
8.	ತಾಲ್ಲೂಕು ಪ್ರತಿನಿಧಿ	ಸದಸ್ಯರು
9.	ತಾಲ್ಲೂಕು ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು	ಸದಸ್ಯರು
10.	ಮುನ್ಸಿಪಾಲಿಟಿ / ಪಟ್ಟಣ ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು	ಸದಸ್ಯರು ಸದಸ್ಯರು
11.	ತಾಲ್ಲೂಕು ಮಟ್ಟದ ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ (ಜಿಲ್ಲಾಧಿಕಾರಿಗಳು ನಾಮನಿರ್ದೇಶನ ಮಾಡುವುದು)	ಸದಸ್ಯರು ....
12.	ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಒಬ್ಬ ಸದಸ್ಯರು	ಸದಸ್ಯರು
13.	ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	ಸದಸ್ಯ ಕಾರ್ಯದರ್ಶಿ

ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದ ಮಕ್ಕಳ ರಕ್ಷಣಾ ಸಮಿತಿಗಳು ಕೇಂದ್ರ ಸರ್ಕಾರದ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

T. Krishnaiah
(ಟಿ.ಕೃಷ್ಣಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ದೂರವಾಣಿ ಸಂಖ್ಯೆ:22032152

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 300 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
6. ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯ ಕಾರ್ಯದರ್ಶಿ/ಎಲ್ಲಾ ಸದಸ್ಯರು.
7. ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮಕ್ಕಳ ರಕ್ಷಣಾ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಮತ್ತು ಸದಸ್ಯ ಕಾರ್ಯದರ್ಶಿ
8. ಸಂಬಂಧಪಟ್ಟ ಗ್ರಾಮ, ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ/ ಆರೋಗ್ಯ ಯೋಜನೆ ಮತ್ತು ಮಾನಿಟರಿಂಗ್ ಸಮಿತಿಯ ಅಧ್ಯಕ್ಷರು, ಸದಸ್ಯರು ಮತ್ತು ಕಾರ್ಯದರ್ಶಿ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

(ಕ್ರಮ ಸಂ:6, 7, ಮತ್ತು 8 ಅನ್ನು ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಇವರ ಮುಖಾಂತರ ಹೊರಡಿಸುವುದು)

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 152 ಮಭಾಬ 2013

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.09.2013.

ಸೇರ್ಪಡೆ

ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳನ್ವಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕವನ್ನು ರಚಿಸಿ ದಿನಾಂಕ:23.09.2011 ರಂದು ಹೊರಡಿಸಲಾದ ಆದೇಶ ಸಂಖ್ಯೆ:ಮಮಇ 79 ಮಭಾಬ 2011ರ ಆದೇಶ ಭಾಗದ ಕ್ರಮ ಸಂಖ್ಯೆ.9ರ ನಂತರ ಈ ಕೆಳಕಂಡ ಅಧಿಕಾರಿಗಳನ್ನು ಸಹ ಸೇರಿಸಿಕೊಂಡು ಓದಿಕೊಳ್ಳತಕ್ಕದ್ದು.

1. ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ – ಸದಸ್ಯರು.
2. ಸದಸ್ಯ ಕಾರ್ಯದರ್ಶಿ / ಪ್ರತಿನಿಧಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ – ಸದಸ್ಯರು.
3. ಸದಸ್ಯರು, ಜಿಲ್ಲಾ ಪಂಚಾಯತಿ, (ಜಿಲ್ಲಾ ಪಂಚಾಯಿತಿಯ ಒಬ್ಬ ಮಹಿಳಾ ಸದಸ್ಯರು) – ಸದಸ್ಯರು.
4. ಸದಸ್ಯರು, ಮಹಾನಗರ ಪಾಲಿಕೆ/ನಗರ ಸಭೆ (ಮಹಾನಗರ ಪಾಲಿಕೆ/ನಗರ ಸಭೆಯ ಒಬ್ಬ ಮಹಿಳಾ ಸದಸ್ಯರು) – ಸದಸ್ಯರು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಕೆ.ಜಂಕಿ)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 500 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

1) ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
4) ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯ ಕಾರ್ಯದರ್ಶಿ/ಎಲ್ಲಾ ಸದಸ್ಯರು. (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರ ಮುಖಾಂತರ)
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
6. ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಅಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯ ಕಾರ್ಯದರ್ಶಿ/ಎಲ್ಲಾ ಸದಸ್ಯರು.
7. ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮಕ್ಕಳ ರಕ್ಷಣಾ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಮತ್ತು ಸದಸ್ಯ ಕಾರ್ಯದರ್ಶಿ
8. ಸಂಬಂಧಪಟ್ಟ ಗ್ರಾಮ, ಆರೋಗ್ಯ ಮತ್ತು ನೈರ್ಮಲ್ಯ ಸಮಿತಿ/ ಆರೋಗ್ಯ ಯೋಜನೆ ಮತ್ತು ಮಾನಿಟರಿಂಗ್ ಸಮಿತಿಯ ಅಧ್ಯಕ್ಷರು, ಸದಸ್ಯರು ಮತ್ತು ಕಾರ್ಯದರ್ಶಿ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

(ಕ್ರಮ ಸಂ:6, 7, ಮತ್ತು 8 ಅನ್ನು ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಇವರ ಮುಖಾಂತರ ಹೊರಡಿಸುವುದು)

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.